1	2	3	4	5.	6
			99.	18.	ರಾಮಪುರ
			100.	19.	ಕೆಂಪಸಿದ್ದನಹುಂಡಿ
			101.	20.	ಹಳಿಮಾವು
			102.	21.	ತುಂಸೇರಳೆ
			103.	22.	ಸಿಂಧುವಳ್ಳಿ
			104.	23.	ದೇವಿರಮ್ಮನಹಳ್ಳಿ
			105.	24.	ಕುರಿಹುಂಡಿ
			106.	25.	ದುಗ್ಗಳ್ಳಿ
			107.	26.	ದೇವರಾಯಶೆಟ್ಟಿಪುರ
			108.	27.	ಶಿರಮಳ್ಳಿ
			109.	28.	ನೇರಳೆ

ತಾಲ್ಲೂಕು ಕೇಂದ್ರಗಳಲ್ಲಿ ರಂಗಮಂದಿರ ನಿರ್ಮಾಣ ಕುರಿತು

2947(3248) ಶ್ರೀ ಕೃಷ್ಣಪ್ಪ ವಿ. (ದೊಡ್ಡಬಳ್ಳಾಪುರ) ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದ ಎಷ್ಟು ತಾಲ್ಲೂಕು ಕೇಂದ್ರಗಳಲ್ಲಿ ಸಾರ್ವಜನಿಕ ರಂಗ ಮಂದಿರಗಳು ಇಲಾಖಾವತಿಯಿಂದ ನಿರ್ಮಾಣವಾಗಿದೆ;

ಆ) ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿಯೂ ಇಲಾಖಾ ವತಿಯಿಂದ ರಂಗಮಂದಿರ ನಿರ್ಮಾಣ ಮಾಡುವ ಯೋಜನೆ ಸರ್ಕಾರದ ಮುಂದಿದೆಯೇ;

ಇ) ಹಾಗಿದ್ದಲ್ಲಿ, ಪ್ರಸಕ್ತ ಸಾಲಿಗೆ ಎಷ್ಟು ತಾಲ್ಲೂಕುಗಳಿಗೆ ನಿರ್ಮಾಣ ಮಾಡುವ ಗುರಿ ಇದೆ; ಯಾವ ಯಾವ ತಾಲ್ಲೂಕುಗಳಲ್ಲಿ ನಿರ್ಮಾಣ ಮಾಡಲಾಗುವುದು;

ಈ) ಪ್ರಸಕ್ತ ಸಾಲಿಗೆ ದೊಡ್ಡಬಳ್ಳಾಪುರ ತಾಲ್ಲೂಕನ್ನು ಸೇರಿಸಲಾಗಿದೆಯೇ;

ಉ) ರಂಗಮಂದಿರ ನಿರ್ಮಾಣ ಮಾಡಲು ತಗಲುವ ವೆಚ್ಚ ಎಷ್ಟು?

ಶ್ರೀಮತಿ ರಾಣಿ ಸತೀಶ್ (ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ರಾಜ್ಯ ಸಚಿವರು)

ಅ) ತಾಲ್ಲೂಕು ಕೇಂದ್ರಗಳಲ್ಲಿ ರಂಗಮಂದಿರ ನಿರ್ಮಿಸುವ ಯೋಜನೆಯಲ್ಲ.

ಆ) ಉದ್ಭವಿಸುವುದಿಲ್ಲ

ಇ) ಉದ್ಭವಿಸುವುದಿಲ್ಲ.

ಈ) ರಂಗಮಂದಿರಕ್ಕೆ ಸಂಬಂಧಿಸಿದಂತೆ ಅನ್ವಯಿಸುವುದಿಲ್ಲ. ಆದರೆ ದೊಡ್ಡಬಳ್ಳಾಪುರ ತಾಲ್ಲೂಕು ರಾಜ ಘಟ್ಟದಲ್ಲಿ ಬಯಲು ರಂಗಮಂದಿರ ನಿರ್ಮಿಸಲು ಬೇಡಿಕೆ ಬಂದಿದ್ದು ನಿಯಮಗಳ ರೀತಿ ಅವಶ್ಯ ಮಾಹಿತಿಗಳನ್ನು ಒದಗಿಸುವಂತೆ ಪತ್ರ ಬರೆಯಲಾಗಿದೆ.

ಉ) ಉದ್ಭವಿಸುವುದಿಲ್ಲ.

ರಾಜ್ಯದ ಗ್ರಾಮ ಪಂಚಾಯತಿಗಳಲ್ಲಿ ಗ್ರಂಥಾಲಯ ಸ್ಥಾಪಿಸುವುದರ ಬಗ್ಗೆ

2948(3249) ಶ್ರೀ ಕೃಷ್ಣಪ್ಪ ವಿ. (ದೊಡ್ಡಬಳ್ಳಾಪುರ) ಮಾನ್ಯ ವಯಸ್ಕರ ಶಿಕ್ಷಣ, ಗ್ರಂಥಾಲಯಗಳು, ಮುದ್ರಣ ಮತ್ತು ಲೇಖನ ಸಾಮಗ್ರಿಗಳ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?